## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 255

ಸದಸ್ಯರ ಹೆಸರು : ಶ್ರೀ. ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 09/12/2025

ಉತ್ತರಿಸುವ ಸಚಿವರು : ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ | ನಗರ ಸ್ಥಳೀಯ ಸಂಸ್ಥೆಗಳಾದ ನಗರಸಭೆಗಳು, ಪುರಸಭೆಗಳು ಮತ್ತು ಪಟ್ಟಣ ಪಂಚಾಯಿತಿಗಳ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳ ಗೌರವಧನವನ್ನು ಹೆಚ್ಚಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಯಾವ ಹಂತದಲ್ಲಿದೆ ಹಾಗೂ ಈ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು? | ನಗರ ಸ್ಥಳೀಯ ಸಂಸ್ಥೆಗಳಾದ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರ ಗೌರವಧನವನ್ನು ಹೆಚ್ಚಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.<br><br>ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಮತ್ತು ಮಹಾನಗರ ಪಾಲಿಕೆಗಳಲ್ಲಿನ ಮೇಯರ್, ಉಪಮೇಯರ್ ಮತ್ತು ಸದಸ್ಯರ ಗೌರವಧನವನ್ನು ಹೆಚ್ಚಳ ಮಾಡುವ ಕುರಿತು ಇತರ ರಾಜ್ಯಗಳ ಚುನಾಯಿತ ಪ್ರತಿನಿಧಿಗಳ ಗೌರವಧನದ ದಾಖಲೆಗಳನ್ನು ನಿಯಮಾನುಸಾರ ಪರಿಶೀಲಿಸಿ, ಗೌರವಧನವನ್ನು ಹೆಚ್ಚಳ ಮಾಡುವ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ದಿನಾಂಕ:20/09/2025 ರ ಪತ್ರದನ್ವಯ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರನ್ನು ಕೋರಲಾಗಿತ್ತು. ಪ್ರಸ್ತುತ, ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಪರಿಶೀಲನೆಯಲ್ಲಿರುತ್ತದೆ. ಈ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಸಹಮತಿ ದೊರೆತ ನಂತರ ಗೌರವಧನ ಪರಿಷ್ಕರಿಸಲು ಅವಕಾಶವಾಗುತ್ತದೆ. |
| ಆ | ಎಲ್ಲಾ ಚುನಾಯಿತ ಸ್ಥಳೀಯ ಸಂಸ್ಥೆಗಳ ಸದಸ್ಯರುಗಳಿಗೆ ಉಚಿತ ಬಸ್ ಪಾಸ್, ಪಿಂಚಣಿ ಹಾಗೂ ಟೋಲ್ ಫ್ರೀ ಪಾಸ್ ನೀಡುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇದೆಯೇ; ಈ ಕುರಿತು ಸರ್ಕಾರದ ನಿಲುವೇನು? | ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಚುನಾಯಿತ ಸದಸ್ಯರಿಗೆ ಉಚಿತ ಬಸ್ ಪಾಸ್, ಪಿಂಚಣಿ ಹಾಗೂ ಟೋಲ್ ಫ್ರೀ ಪಾಸ್ ನೀಡುವ ಪ್ರಸ್ತಾವನೆ ನಗರಾಭಿವೃದ್ಧಿ ಇಲಾಖೆಯ ಪರಿಶೀಲನೆಯಲ್ಲಿ ಇರುವುದಿಲ್ಲ. |

ಸಂಖ್ಯೆ:ನಅಇ 48 ಎಲ್‌ಸಿಕ್ಯೂ 2025

(ರಹೀಂ ಖಾನ್)

ಪೌರಾಡಳಿತ ಹಾಗೂ ಹಜ್ ಸಚಿವರು